**ಕರ್ನಾಟಕ ಸರ್ಕಾರ**

**ನಿರ್ದೇಶಕರು, ಮಕ್ಕಳ ರಕ್ಷಣಾ ನಿರ್ದೇಶನಾಲಯ ಹಾಗೂ ಸದಸ್ಯ ಕಾರ್ಯದರ್ಶಿಗಳು, ಕರ್ನಾಟಕ ರಾಜ್ಯ ಸಮಗ್ರ ಮಕ್ಕಳ ರಕ್ಷಣಾ ಸೊಸೈಟಿ, ಬೆಂಗಳೂರು ರವರು ಹೊರಡಿಸಿರುವ ನಡವಳಿಗಳು:**

**ವಿಷಯ:** ಮಕ್ಕಳ ರಕ್ಷಣಾ ನಿರ್ದೇಶನಾಲಯ, ಸಮಗ್ರ ಮಕ್ಕಳ ರಕ್ಷಣಾ ಸೊಸೈಟಿ, ಜಿಲ್ಲಾ ಮಕ್ಕಳ ರಕ್ಷಣಾ ಘಟಕಕ್ಕೆ ಸಂಬಂಧಿಸಿದಂತೆ **ಜಾಗೃತ ಅಧಿಕಾರಿ** (Vigilance Officer) ಯವರನ್ನು ನೇಮಿಸುವ ಕುರಿತು.

**ಉಲ್ಲೇಖ:**
1)ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 14 ಸೇಲೋಯು 2016, ದಿ:14-03-2016
2) ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 88 ಸೇಲೋಯು 2016 ದಿ:22-06-2016
3)ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 88 ಸೇಲೋಯು 2016 (ಭಾಗ-1) ದಿನಾಂಕ:22-02-2018.

*****

**ಪ್ರಸ್ತಾವನೆ:**

ಮೇಲಿನ ಉಲ್ಲೇಖಿತ ಕ್ರಮ ಸಂಖ್ಯೆ(1)ರಲ್ಲಿ ದಿನಾಂಕ:14-03-2016ರ ಆದೇಶದನ್ವಯ, ರಾಜ್ಯದಲ್ಲಿ ಭ್ರಷ್ಟಾಚಾರ ತಡೆ ಅಧಿನಿಯಮ, 1988ನ್ನು ಪರಿಣಾಮಕಾರಿಯಾಗಿ ಜಾರಿಗೆ ತರಲು ಹಾಗೂ ಸ್ವತಂತ್ರವಾಗಿ ತನಿಖೆ ನಡೆಸಲು ಒಂದು ಪ್ರತ್ಯೇಕ ಭ್ರಷ್ಟಾಚಾರ ನಿಗ್ರಹ ದಳವನ್ನು (Anti Corruption Bureau) ಸೃಜಿಸಲಾಗಿದೆ.

ಮೇಲಿನ ಉಲ್ಲೇಖಿತ ಕ್ರಮ ಸಂಖ್ಯೆ (2)ರಲ್ಲಿ ದಿನಾಂಕ:22-06-2016ರ ಆದೇಶದಲ್ಲಿ, ಭ್ರಷ್ಟಾಚಾರ ನಿಗ್ರಹ ದಳವನ್ನು ಸೃಜಿಸಿ ಹೊರಡಿಸಿರುವ ದಿನಾಂಕ:14-03-2016ರ ಸರ್ಕಾರದ ಆದೇಶದಲ್ಲಿನ ಆದೇಶ ಭಾಗದ ಕಂಡಿಕೆ 7 ರನ್ವಯ ಸರ್ಕಾರದ ಪ್ರತಿಯೊಂದು ಇಲಾಖೆ ಮತ್ತು ಇಂಜಿನಿಯರಿಂಗ್ ಇಲಾಖೆಯನ್ನೊಳಗೊಂಡಂತೆ ನಿರ್ದೇಶನಾಲಯ/ಆಯುಕ್ತಾಲಯ, ಕ್ಷೇತ್ರ ಇಲಾಖೆ, ಸಾರ್ವಜನಿಕೆ ಉದ್ದಿಮೆಗಳು, ಸರ್ಕಾರದಿಂದ ಸ್ಥಾಪಿತವಾದ ನಿಗಮ/ಮಂಡಳಿಗಳು ಮತ್ತು ವಿಧಾನ ಮಂಡಲದ ಅಧಿನಿಯಮದಡಿ ಸ್ಥಾಪಿತವಾಗಿರುವ ಸ್ಥಳೀಯ ಸಂಸ್ಥೆಗಳು ಹಾಗೂ ಎಲ್ಲಾ ಶಾಸನಬದ್ಧ ಸಂಸ್ಥೆಗಳಲ್ಲಿ ಜಾಗೃತ ಕೋಶಗಳನ್ನು ಚಾಲನೆಗೊಳಿಸುವ ನಿಟ್ಟಿನಲ್ಲಿ ಕಾರ್ಯವಿಧಾನ/ ಮಾರ್ಗಸೂಚಿಗಳನ್ನು ಹೊರಡಿಸಲಾಗಿರುತ್ತದೆ.

ದಿನಾಂಕ:22-06-2016ರ ಆದೇಶದ ಭಾಗದ ಕಂಡಿಕೆ 1(2)ರಲ್ಲಿ ತಿಳಿಸಿರುವಂತೆ ಸರ್ಕಾರದ ಪ್ರತಿಯೊಂದು ಕ್ಷೇತ್ರ ಇಲಾಖೆಗಳಲ್ಲಿ ಸಂಭಾವನೀಯ ಲಂಚ, ಭ್ರಷ್ಟಾಚಾರ, ಪೋರ್ಜರಿ, ವಂಚನೆ, ವಿಶ್ವಾಸ ವಂಚನೆ, ಖೊಟ್ಟಿ ದಾಖಲಾತಿ, ಅಕ್ರಮ ಆಸ್ತಿ ಪ್ರಕರಣ ಮತ್ತು ಸಂಕೀರ್ಣ ಸ್ವರೂಪದ ಪ್ರಕರಣಗಳ ಬಗ್ಗೆ ಕ್ರಮವಹಿಸಲು ಒಂದು ಜಾಗೃತ ಕೋಶ ಇರತಕ್ಕದೆಂದು ಹಾಗೂ ಜಿಲ್ಲಾ ಮಟ್ಟದ ಮುಖ್ಯಸ್ಥರ ನಂತರದ ಅಧಿಕಾರಿಯನ್ನು ಸದರಿ ಕೋಶದ ಜಾಗೃತ ಅಧಿಕಾರಿ ಎಂದು ನೇಮಿಸಲು ಆದೇಶಿಸಿರುವ ಹಿನ್ನೆಲೆಯಲ್ಲಿ ಮಕ್ಕಳ ರಕ್ಷಣಾ ನಿರ್ದೇಶನಾಲಯ, ಸಮಗ್ರ ಮಕ್ಕಳ ರಕ್ಷಣಾ ಸೊಸೈಟಿ, ವ್ಯಾಪ್ತಿಗೊಳಪಟ್ಟ ಜಿಲ್ಲಾ ಮಕ್ಕಳ ರಕ್ಷಣಾ ಘಟಕಕ್ಕೆ ಜಿಲ್ಲಾಧಿಕಾರಿಯವರು ಮುಖ್ಯಸ್ಥರಾಗಿದ್ದು, ನಂತರದ ಅಧಿಕಾರಿಯಾದ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಯವರನ್ನು **"ಜಾಗೃತ ಕೋಶದ ಜಾಗೃತ ಅಧಿಕಾರಿ"** (Vigilance Officer)ಯನ್ನಾಗಿ ನೇಮಿಸಿ ಹಾಗೂ ಈ ಜಾಗೃತ ಅಧಿಕಾರಿಯವರೊಂದಿಗೆ ಅಧೀಕ್ಷಕರು, ಬಾಲಕರ ಬಾಲಮಂದಿರ, ಅಧೀಕ್ಷಕರು, ಬಾಲಕಿಯರ ಬಾಲಮಂದಿರ ಮತ್ತು ಅಧೀಕ್ಷಕರು ವೀಕ್ಷಣಾಲಯ ಇವರನ್ನು ಒಳಗೊಂಡಂತೆ ಜಾಗೃತ ಕೋಶ ರಚಿಸಲು ಈ ಕೆಳಕಾಣಿಸಿರುವಂತೆ ಆದೇಶ ಹೊರಡಿಸಲಾಗಿದೆ.

ಸಂಖ್ಯೆ:ಮರನಿ/ಆಡಳಿತ/ಮು.ಜಾ.ಅ-08/2021-22 ದಿನಾಂಕ: 11 -11-2021

**ಆದೇಶ**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಹಾಗೂ ಉಲ್ಲೇಖಿತ ಸರ್ಕಾರದ ಆದೇಶ(2)ರ ಮೇರೆಗೆ ಮಕ್ಕಳ ರಕ್ಷಣಾ ನಿರ್ದೇಶನಾಲಯದ ಅಡಿಯಲ್ಲಿ ಸೇವೆ ಸಲ್ಲಿಸುವ ಎಲ್ಲಾ ಭಾಗೀದಾರರಿಗೆ ಅನ್ವಯಿಸುವಂತೆ ಕರ್ನಾಟಕ ರಾಜ್ಯ ಸಮಗ್ರ ಮಕ್ಕಳ ರಕ್ಷಣಾ ಸೊಸೈಟಿಯ ವ್ಯಾಪ್ತಿಗೆ ಒಳಪಡುವಂತೆ ಜಿಲ್ಲಾ ಮಟ್ಟದಲ್ಲಿ, ಜಿಲ್ಲಾ ಮಕ್ಕಳ ರಕ್ಷಣಾ ಘಟಕದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಜಿಲ್ಲಾ ಮಕ್ಕಳ

ರಕ್ಷಣಾಧಿಕಾರಿಯವರನ್ನು **"ಜಾಗೃತ ಅಧಿಕಾರಿ"** (Vigilance Officer) ಯನ್ನಾಗಿ ನೇಮಿಸಿ ಈ ಕೆಳಕಾಣಿಸಿರುವಂತೆ ಜಾಗೃತ ಕೋಶವನ್ನು ರಚಿಸಿ ಆದೇಶಿಸಿದೆ.

**ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಜಾಗೃತ ಕೋಶ**

| ಕ್ರ.ಸಂ. | ಹುದ್ದೆಯ ಹೆಸರು | | ಕೋಶದಲ್ಲಿ ಪದನಾಮ |
|---|---|---|---|
| 1. | ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು | ಜಿಲ್ಲಾ ಮಕ್ಕಳ ರಕ್ಷಣಾ ಘಟಕ | ಜಾಗೃತ ಅಧಿಕಾರಿ |
| 2. | ಸಹಾಯಕ ಮಕ್ಕಳ ರಕ್ಷಣಾಧಿಕಾರಿ | ಜಿಲ್ಲಾ ಕೇಂದ್ರ ಸ್ಥಾನದ | ಸದಸ್ಯರು |
| 3. | ಅಧೀಕ್ಷಕರು | ಬಾಲಕಿಯರ ಬಾಲಮಂದಿರ | ಸದಸ್ಯರು |
| 2. | ಅಧೀಕ್ಷಕರು | ಬಾಲಕರ ಬಾಲಮಂದಿರ | ಸದಸ್ಯರು ಕಾರ್ಯದರ್ಶಿ |

ಸದರಿ ಜಾಗೃತ ಕೋಶವು ಉಲ್ಲೇಖ(3)ರ ಸರ್ಕಾರದ ಆದೇಶದಲ್ಲಿ ನಿರ್ದಿಷ್ಟ ಪಡಿಸಿರುವ ಕಾರ್ಯಗಳನ್ನು ನಿರ್ವಹಿಸತಕ್ಕದ್ದು ಮತ್ತು ಪ್ರತಿ ಮಾಹೆಯ ಜಾಗೃತ ವರದಿಯನ್ನು ಮುಂದಿನ ಮಾಹೆಯ 5ನೇ ತಾರೀಖಿನೊಳಗೆ ಈ ನಿರ್ದೇಶನಾಲಯಕ್ಕೆ ಸಲ್ಲಿಸತಕ್ಕದ್ದು.

11.11.2021

ನಿರ್ದೇಶಕರು
ಮಕ್ಕಳ ರಕ್ಷಣಾ ನಿರ್ದೇಶನಾಲಯ
ಹಾಗೂ ಸದಸ್ಯ ಕಾರ್ಯದರ್ಶಿಗಳು
ಕರ್ನಾಟಕ ರಾಜ್ಯ ಸಮಗ್ರ ಮಕ್ಕಳ ರಕ್ಷಣಾ ಸೊಸೈಟಿ,
ಬೆಂಗಳೂರು.

<u>ಪ್ರತಿಯನ್ನು ಮಾಹಿತಿಗಾಗಿ.</u>

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿಗಳು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಶೇಷ ಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಇಲಾಖೆ, ಬೆಂಗಳೂರು.
3. ಕೋಶದ ಎಲ್ಲಾ ಅಧಿಕಾರಿಗಳಿಗೆ.
4. ಕಛೇರಿ ಪ್ರತಿ.